ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**

ಸಂಖ್ಯೆ:
No. ಬೆಂಅಪ್ರಾ/ಅಸ/ಅಅ-3/ತಾಸ-2/ಸ್ವಾಧೀನ ಪತ್ರ/ಟಿ-324/2022-23

ದಿನಾಂಕ : 3/12/2022
Date

ಅನುಸೂಚಿ-9

(ಉಪವಿಧಿ ಸಂಖ್ಯೆ: 5.5.1)

ಅಭಿಯಂತರ ಸದಸ್ಯರವರ ಕಛೇರಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು, ದಿನಾಂಕ:____/12/2022.

## ಸ್ವಾಧೀನಾನುಭವ ಪತ್ರ

ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಕೊಡತಿ ಗ್ರಾಮದ ಸರ್ವೆ ನಂ.92/3, 92/4 ಮತ್ತು 92/10 ರಲ್ಲಿ ತಳ+ನೆಲ+12ಮೇಲಂತಸ್ತು ಹೊಂದಿರುವ 156 ವಸತಿ ಘಟಕಗಳ ಬಹುಮಹಡಿ ವಸತಿ ಕಟ್ಟಡ ಹಾಗೂ ನೆಲ+03ಮೇಲಂತಸ್ತು ಹೊಂದಿರುವ Recreation Centre ಕಟ್ಟಡವನ್ನು ನಿರ್ಮಿಸಲು ಉದ್ದೇಶಿಸಿ, ಪ್ರಾಧಿಕಾರದಿಂದ ಸಂಖ್ಯೆ:ಬೆಂಅಪ್ರಾ/ನಮ/ಅಸ/ಅಅ-3/ತಾಸ-4/ಪೂ/09/2020-21, ದಿನಾಂಕ:01-10-2020ರಂದು ನಕ್ಷೆ ಮಂಜೂರಾತಿ ನೀಡಲಾಗಿರುತ್ತದೆ. ತದನಂತರ ಸದರಿ ಕಟ್ಟಡಗಳಿಗೆ ಪ್ರಾಧಿಕಾರದಿಂದ ಸಂಖ್ಯೆ:ಬೆಂಅಪ್ರಾ/ಅಸ/ಅಅ-1/ತಾಸ-4/ಪ್ರಾಪ್ರಪ/ಟಿ-130/2021-22, ದಿನಾಂಕ:31-08-2021 ರಂದು ಪ್ರಾರಂಭಿಕ ಪ್ರಮಾಣ ಪತ್ರ ನೀಡಲಾಗಿರುತ್ತದೆ.

ಮುಂದುವರಿದು, ಅಭಿವೃದ್ಧಿದಾರರಾದ ತಾವು ಪ್ರಾಧಿಕಾರಕ್ಕೆ ಮನವಿ ಸಲ್ಲಿಸಿ, ಮೇಲ್ಕಂಡ ಸರ್ವೆ ನಂಬರಿನಲ್ಲಿ ನಿರ್ಮಿಸಿರುವ ಬಹುಮಹಡಿ ವಸತಿ ಕಟ್ಟಡ ಹಾಗೂ Recreation Centre ಕಟ್ಟಡಕ್ಕೆ ಸ್ವಾಧೀನಾನುಭವ ಪ್ರಮಾಣ ಪತ್ರ ನೀಡುವಂತೆ ಕೋರಿರುತ್ತಾರೆ.

ಅದರಂತೆ, ಸದರಿ ಕಟ್ಟಡಗಳ ನಿರ್ಮಾಣವು ಮಂಜೂರಾದ ನಕ್ಷೆಯಂತೆ ಪೂರ್ಣಗೊಂಡಿರುವುದಾಗಿ ತಾವು ಹಾಗೂ ನೊಂದಾಯಿತ ವಾಸ್ತು ಶಿಲ್ಪಿ/ಇಂಜಿನಿಯರ್/ಮೇಲ್ವಿಚಾರಕರು ನೀಡಿದ ದೃಢೀಕೃತ ಪತ್ರದ ಆಧಾರದ ಮೇಲೆ ಮತ್ತು ಪ್ರಶ್ನಿತ ಕಟ್ಟಡವನ್ನು ಕಾರ್ಯಪಾಲಕ ಅಭಿಯಂತರರು (ಪೂರ್ವ) ರವರು ದಿನಾಂಕ:22-09-2022 ರಂದು ಪರಿವೀಕ್ಷಣೆ ನಡೆಸಿ, ಅಭಿಯಂತರ ಅಧಿಕಾರಿ-3, ಬೆಂ.ಅ.ಪ್ರಾ. ರವರಿಗೆ ಸಲ್ಲಿಸಿರುವ ಸ್ಥಳ ಪರಿಶೀಲನಾ ವರದಿಯನ್ವಯ, ಮೇಲ್ಕಂಡ ಕಟ್ಟಡಗಳ ನಿರ್ಮಾಣ ಕಾರ್ಯವು ತಾವು ಸಲ್ಲಿಸಿದ್ದ ಮಂಜೂರಾದ ಅನುಮೋದಿತ ಕಟ್ಟಡ ನಕ್ಷೆಯಂತೆಯೇ ಪೂರ್ಣಗೊಂಡಿರುವುದು ಮನವರಿಕೆಯಾಗಿದೆ. ಸದರಿ ಕಟ್ಟಡಗಳಿಗೆ ಸ್ವಾಧೀನಾನುಭವ ಪತ್ರ ನೀಡಲು ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ:4907, ದಿನಾಂಕ:18-11-2022 ರಂದು ಅನುಮೋದನೆ ನೀಡಿರುತ್ತಾರೆ. ಆದುದರಿಂದ, ಕೊಡತಿ ಗ್ರಾಮದ ಸರ್ವೆ ನಂ.92/3, 92/4 ಮತ್ತು 92/10 ರಲ್ಲಿ ನಿರ್ಮಿಸಿರುವ ತಳ+ನೆಲ+12ಮೇಲಂತಸ್ತು ಹೊಂದಿರುವ 156 ವಸತಿ ಘಟಕಗಳ ಬಹುಮಹಡಿ ವಸತಿ ಕಟ್ಟಡ ಹಾಗೂ ನೆಲ+03ಮೇಲಂತಸ್ತು ಹೊಂದಿರುವ Recreation Centre ಕಟ್ಟಡಕ್ಕೆ ಈ ಕೆಳಗಿನ ಷರತ್ತುಗಳಿಗೊಳಿಗೊಳಪಡಿಸಿ ಸ್ವಾಧೀನಪಡಿಸಿಕೊಳ್ಳಲು ಈ ಮೂಲಕ ಆಯುಕ್ತರವರ ಪರವಾಗಿ ಅನುಮತಿ ನೀಡಲಾಗಿದೆ.

## ಪಾಲಿಸಬೇಕಾದ ಷರತ್ತುಗಳು

1) ಕಟ್ಟಡದ ಗುಣಮಟ್ಟ, ಸುರಕ್ಷತೆ ಹಾಗೂ ವಿನ್ಯಾಸಗಳಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯಾವುದೇ ರೀತಿಯಿಂದ ಜವಾಬ್ದಾರರಾಗಿರುವುದಿಲ್ಲ. ಈ ಅಂಶಗಳ ಪೂರ್ಣ ಜವಾಬ್ದಾರಿಯು ಅಭಿವೃದ್ಧಿದಾರರದ್ದೇ ಆಗಿರುತ್ತದೆ.
2) ವಾಹನ ನಿಲುಗಡೆ ಪ್ರದೇಶವು ಸಂಪೂರ್ಣ ಸುರಕ್ಷತೆಯಿಂದ ಕೂಡಿದ್ದು, ವಾಹನ ನಿಲುಗಡೆಗೆ ಮಾತ್ರ ಉಪಯೋಗಿಸತಕ್ಕದ್ದು.
3) ಒಳಚರಂಡಿ ವ್ಯವಸ್ಥೆಗಾಗಿ ಸ್ಥಾಪಿಸಿದ ಶುದ್ದೀಕರಣ ಘಟಕವನ್ನು (S.T.P) ಯಾವಾಗಲೂ ಸುಸ್ಥಿತಿಯಲ್ಲಿಡುವುದು ಹಾಗೂ ಶುದ್ಧೀಕರಿಸಿದ ನೀರನ್ನು ಮನೆಗಳಲ್ಲಿ ಶೌಚಾಲಯ Gardening ಹಾಗೂ ಗಿಡಮರ, Lawnಗಳಿಗಾಗಿ ಕಡ್ಡಾಯವಾಗಿ ಉಪಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ Sewage ನೀರನ್ನು ಹೊರಗಡೆ ಬಿಡತಕ್ಕದ್ದಲ್ಲ.
4) ಅಭಿವೃದ್ಧಿದಾರರು ಕಟ್ಟಡ ಸ್ವಾಧೀನಪಡಿಸಿಕೊಂಡ ನಂತರ, ಬಿಬಿಎಂಪಿ/ಬಿಡಿಎ/ ಗ್ರಾಮ ಪಂಚಾಯಿತಿ/ Statutory Bodies ಇನ್ನಾವುದೇ ಶುಲ್ಕ ವಿಧಿಸದಿದ್ದಲ್ಲಿ ಅದನ್ನು ಸಂದಾಯ ಮಾಡತಕ್ಕದ್ದು.

Shanthalagamesh
ಆಯುಕ್ತರ ಪರವಾಗಿ 3/12/22
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು.

. . 2/-

5) ಅರ್ಜಿದಾರರು ಕಟ್ಟಡಕ್ಕೆ ಬೇಕಾದ ವಿದ್ಯುಚ್ಛಕ್ತಿಯ ಪರ್ಯಾಯ ವ್ಯವಸ್ಥೆಗಾಗಿ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು.
6) ಕುಡಿಯುವ ಹಾಗೂ ಬಳಸುವ ನೀರಿಗಾಗಿ ಪ್ರತ್ಯೇಕ ಪೈಪ್ ಲೈನುಗಳನ್ನು (Dual Pipe System) ಅಳವಡಿಸುವುದು.
7) ಅರ್ಜಿದಾರರು ನೀರು ಸರಬರಾಜಿಗಾಗಿ ಸಂಬಂಧಪಟ್ಟ ಇಲಾಖೆಯನ್ನು (BWSSB/Gram Panchayath) ಅವಲಂಬಿಸದೇ ನೀರಿಗಾಗಿ ತಮ್ಮ ಸ್ವಂತ ವ್ಯವಸ್ಥೆ ಮಾಡಿಕೊಳ್ಳುವುದು.
8) ಅರ್ಜಿದಾರರು ಯಾವುದೇ ರೀತಿಯ ಪ್ಲಾಸ್ಟಿಕ್, ಪೇಪರ್, ಗಾರ್ಬೇಜ್ ಇತ್ಯಾದಿಗಳನ್ನು ಸಂಗ್ರಹಿಸಿ Dry Waste ಮತ್ತು Wet Waste ಅನ್ನು ಬೇರ್ಪಡಿಸಿ ನಿಗಧಿತ ಸ್ಥಳಕ್ಕೆ ಸಾಗಿಸಲು ಸೂಕ್ತ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಿಕೊಳ್ಳತಕ್ಕದ್ದು.
9) ಅರ್ಜಿದಾರರು ಕಟ್ಟಡದಲ್ಲಿನ ವಿದ್ಯುತ್ತೀಕರಣ ಕಾಮಗಾರಿಗಳನ್ನು ಸರ್ಕಾರದಿಂದ ನೊಂದಾಯಿತ Electrical Contractor ರವರಿಂದ ಪೂರೈಸುವುದು.
10) ಅಭಿವೃದ್ಧಿದಾರರು ಭದ್ರತಾ ಸಿಬ್ಬಂದಿಯವರನ್ನು ನೇಮಿಸಿ ಕಟ್ಟಡದ ಪ್ರವೇಶ ದ್ವಾರದಲ್ಲಿ ಒಳಬರುವ ಹಾಗೂ ಹೊರಹೋಗುವ ವಾಹನಗಳಿಗೆ ಪ್ರತ್ಯೇಕ ವ್ಯವಸ್ಥೆಯನ್ನು ಕಲ್ಪಿಸಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳುವುದು. ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು.
11) ಅಭಿವೃದ್ಧಿದಾರರು ಯೋಜನೆಯ ಒಳಾಂಗಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪರಿಸರ ಸಂರಕ್ಷಣೆಗೆ ಸಂಬಂಧಿಸಿದ ಎಲ್ಲಾ ಅಗತ್ಯ ಕ್ರಮಗಳನ್ನು ಕಟ್ಟುನಿಟ್ಟಾಗಿ ಕೈಗೊಳ್ಳತಕ್ಕದ್ದು.
12) ಕಟ್ಟಡದ ಆವರಣದಲ್ಲಿ ಗಿಡಗಳನ್ನು ನೆಡುವುದು ಕಡ್ಡಾಯವಾಗಿರುತ್ತದೆ
13) ಕಟ್ಟಡದ ನಿರ್ಮಾಣ ವೆಚ್ಚವು ಪ್ರತೀ ಚರದ ಅಡಿಗೆ 650/-ಕ್ಕಿಂತ ಹೆಚ್ಚಾದಲ್ಲಿ ಕಾರ್ಮಿಕ ಕಲ್ಯಾಣ ನಿಧಿಗೆ ಅಂದಾಜು ಮೊತ್ತದ ಶೇ 1% ರಷ್ಟು ಮೊತ್ತವನ್ನು ಪ್ರಾಧಿಕಾರಕ್ಕೆ ಭರಿಸತಕ್ಕದ್ದು.
14) ಯೋಜನೆಯಲ್ಲಿ ಮಳೆ ನೀರು ಕೊಯ್ಲುಗಾಗಿ ಸೂಕ್ತ ವ್ಯವಸ್ಥೆಯನ್ನು ಕಲ್ಪಿಸಿಕೊಂಡು ಗೃಹ ಹಾಗೂ ಇನ್ನಿತರೆ ಉಪಯೋಗಗಳಿಗಾಗಿ ಬಳಸಲು ಅವಕಾಶ ಕಲ್ಪಿಸಿಕೊಳ್ಳತಕ್ಕದ್ದು.
15) ಪ್ರಧಾನ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, ಬೆಂಗಳೂರು ರವರ ದಿನಾಂಕ: 04-03-2006 ರಂದು ವಿಧಿಸಿದ ಷರತ್ತುಗಳಿಗೆ ಅರ್ಜಿದಾರರು ಭದ್ದರಾಗಿರತಕ್ಕದ್ದು.
16) ಅರ್ಜಿದಾರರು ಕಟ್ಟಡದ ಸ್ವಾಧೀನಾನುಭವ ಪತ್ರ ಪಡೆಯಲು ತಪ್ಪು ದಾಖಲೆಗಳನ್ನೇನಾದರು ಸಲ್ಲಿಸಿರುವುದು ಕಂಡುಬಂದಲ್ಲಿ ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ಸ್ವಾಧೀನಾನುಭವ ಪತ್ರವನ್ನು ರದ್ದುಪಡಿಸಲಾಗುವುದು.
17) ಕಟ್ಟಡ ನಿರ್ಮಾಣದ ಸಮಯದಲ್ಲಿ ಸೆಂಟ್ರಿಂಗ್ ಅಥವಾ ಇನ್ನಿತರೆ ಕಾರಣಗಳಿಂದ ಏನಾದರೂ ಅನಾಹುತ ಸಂಭವಿಸಿದಲ್ಲಿ ಅದಕ್ಕೆ ಅರ್ಜಿದಾರರು ಸಂಪೂರ್ಣ ಜವಾಬ್ದಾರರಾಗಿರುತ್ತಾರೆ. ನಕ್ಷೆ ಮಂಜೂರಾತಿ ನೀಡಿದ ಇಲಾಖೆಯು ಜವಾಬ್ದಾರರಾಗಿರುವುದಿಲ್ಲ.

Shamalagamesh
3/12/22
ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು. Dmg.

..3/-

18) ಇತ್ತೀಚಿನ ಸರ್ಕಾರಿ ಆದೇಶ ಸಂಖ್ಯೆ: ನಅಇ/536/ಬೆಂಭೂಸ್ವಾ/2017, ದಿನಾಂಕ: 16.03.2019 ರನ್ವಯ ಮಾನ್ಯ ಸರ್ವೋಚ್ಛ ನ್ಯಾಯಾಲಯದ ಅಪೀಲು ಸಂಖ್ಯೆ:5016//2016 ರ ಷರತ್ತಿಗೊಳಪಟ್ಟಿರುತ್ತದೆ (NGT ಬಫರ್ ಗೆ ಸಂಬಂಧಿಸಿದಂತೆ).

19) ಹಸಿರು ನ್ಯಾಯಾಧಿಕರಣವು (NGT) ಆಗಿಂದಾಗ್ಗೆ ಹೊರಡಿಸುವ / ವಿಧಿಸುವ ಯಾವುದೇ ಷರತ್ತುಗಳಿಗೆ ಅರ್ಜಿದಾರರು ಬದ್ದರಾಗಿರತಕ್ಕದ್ದು ಹಾಗೂ ಪ್ರಶ್ನಿತ ಪ್ರದೇಶವು NGT ಆದೇಶದನ್ವಯ ಬಫರ್ ವಲಯದಲ್ಲಿ ಇರುವುದಾದಲ್ಲಿ ಸ್ವಾಧೀನಾನುಭವ ಪತ್ರವನ್ನು ಹಿಂಪಡೆಯುವ ಷರತ್ತಿಗೊಳಪಡಿಸಿದೆ.

20) ಅಭಿವೃದ್ಧಿದಾರರು ವಾಹನ ನಿಲುಗಡೆ ಸ್ಥಳದಲ್ಲಿ ಕಡ್ಡಾಯವಾಗಿ ವಿದ್ಯುತ್ ವಾಹನಗಳಿಗೆ ಚಾರ್ಜಿಂಗ್ ಪಾಯಿಂಟ್ ಗಳನ್ನು ಅಳವಡಿಸತಕ್ಕದ್ದು.

21) ಅಭಿವೃದ್ಧಿದಾರರು ಬೆಟರ್ ಮೆಂಟ್ ತೆರಿಗೆ ಪಾವತಿಸುವ ಕುರಿತು ಮಾನ್ಯ ಉಚ್ಛ ನ್ಯಾಯಾಲಯದ ನೀಡುವ 45727-45730/2011 (ಬೆಂಅಪ್ರಾ), ದಿನಾಂಕ: 03.09.2012ರ ತೀರ್ಮಾನದ ವಿರುದ್ಧ ಪ್ರಾಧಿಕಾರವು ಮೇಲ್ಮನವಿ ಸಲ್ಲಿಸಲು ತೀರ್ಮಾನಿಸಿದ್ದು, ಮೇಲ್ಮನವಿಯ ಕುರಿತು ನ್ಯಾಯಾಲಯ ನೀಡುವ ತೀರ್ಪಿಗೆ ಬದ್ದರಾಗಿರಲು ಷರತ್ತಿಗೆ ಒಳಪಡಿಸಲಾಗಿದೆ.

22) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು.

23) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ ಷರತ್ತುಗಳಿಗೆ ಅರ್ಜಿದಾರರು ಭದ್ದರಾಗಿರತಕ್ಕದ್ದು.

Shanmugam 3/12/2
ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು.

ರವರಿಗೆ,

M/s ECSTASY Projects Pvt Ltd.,
"Trifecta Adatto", 13th Floor,
Site No.66/2, 67/1, White field Main Road,
Garudacharpalya, Mahadevpura Post,
Bangalore – 560 048.

ಯಥಾಪ್ರತಿಯನ್ನು,

- ಕಾರ್ಯಪಾಲಕ ಅಭಿಯಂತರರು (ಪೂರ್ವ) ರವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ರವಾನಿಸಿದೆ.